## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಹಾಲಿ ಜಾರಿಯಲ್ಲಿರುವ ವಾರ್ಷಿಕ ಆದಾಯ ಮಿತಿಯನ್ನು ಹೆಚ್ಚಿಸುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 525 ಬಿಎಂಎಸ್ 2012 ಬೆಂಗಳೂರು, ದಿನಾಂಕ: 25.05.2013.
2. ಡಿಬಿಸಿಡಿಸಿ ಪ್ರಸ್ತಾವನೆ ಸಂ:ದೇಹಿನಿ/ಸ/ಆ.ನಿ.ಹೆ/ಸಿ.ಆರ್-32/2017-18, ದಿನಾಂಕ:18.05.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ವಿವಿಧ ಸಾಲ ಮತ್ತು ಸಹಾಯಧನ ಯೋಜನೆಗಳ (ವಿದೇಶಿ ವ್ಯಾಸಂಗ ಹೊರದುಪಡಿಸಿ) ಫಲಾನುಭವಿಗಳ ಕುಟುಂಬ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮಾಂತರ ಪ್ರದೇಶದವರಿಗೆ ರೂ.40,000/-ಗಳು ಹಾಗೂ ನಗರ ಪ್ರದೇಶದವರಿಗೆ ರೂ.55,000/-ಗಳಿಗೆ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಗಮದ ವಿವಿಧ ಯೋಜನೆಗಳಲ್ಲಿ ಸಾಲ-ಸೌಲಭ್ಯ ಪಡೆಯಲು ಫಲಾನುಭವಿಗಳು ಬಿ.ಪಿ.ಎಲ್ ಕುಟುಂಬದವರಾಗಿರಬೇಕು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಎಲ್ಲಾ ನಿಗಮಗಳಲ್ಲಿ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ಸಾಲ ಯೋಜನೆ, ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಕಿರು ಸಾಲ ಯೋಜನೆ ಹಾಗೂ ಇನ್ನಿತರ ಯೋಜನೆಗಳಲ್ಲಿ ಸಾಲ-ಸೌಲಭ್ಯ ಪಡೆಯಲು ಬಿ.ಪಿ.ಎಲ್ ಕುಟುಂಬದ ಆದಾಯ ಮಿತಿಯು ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಮತ್ತು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳಿಗೆ ಹೆಚ್ಚಿಸಿ ನಿಗಧಿಪಡಿಸಿ ಸರ್ಕಾರ ಆದೇಶ ಹೊರಡಿಸುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 359 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 06-07-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಫಲಾನುಭವಿಗಳ ಆದಾಯದ ಮಿತಿಯನ್ನು ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಮತ್ತು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳಿಗೆ ಹೆಚ್ಚಿಸಿ ಆದೇಶಿಸಿದೆ.

V. Akkamahadevi

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi
06/7/22

(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಬೆಂಗಳೂರು.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

********